

ಅರುಣ ಪಿ. ಭಟ್ಟ



## ವಾರಭವಿಷ್ಯ: 18.01.2024ರಿಂದ 24.01.2024ರವರೆಗೆ




ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ವಾರದ ಮಧ್ಯ ಭಾಗದಲ್ಲಿ ರಹಸ್ಯವಾದ ಸಂಗತಿಯೊಂದು ತಿಳಿದುಬರಲಿದೆ. ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರುಪೇರಾಗಬಹುದು. ಸಾಮಾಜಿಕ ಗೌರವಕ್ಕೆ ಪಾತ್ರರಾಗಲಿದ್ದೀರಿ. ತಜ್ಞ ವೈದ್ಯರು ನೆರವು ನೀಡುತ್ತಾರೆ. ಶುಭದಿನ 19. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

ವೃತ್ತಿಪರರಿಗೆ ಉತ್ತಮವಾದ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ನಿಮ್ಮ ಪ್ರಗತಿಗೆ ಪೋಷಕರು ಸಂತೋಷ ಪಡಲಿದ್ದಾರೆ. ದೀರ್ಘ ಕಾಲದಿಂದ ಇರುವ ಆರೋಗ್ಯ ಸಮಸ್ಯೆಗಳಿಂದ ಮುಕ್ತಿ ದೊರೆಯಲಿದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸು ವಿಚಾರಕ್ಕೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 20. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.







ಉದ್ಯೋಗಕ್ಕೆ ಪ್ರಯತ್ನಿಸುತ್ತಿರುವವರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಲಿದ್ದೀರಿ. ಸೋದರ ಸೋದರಿಯರ ಜೊತೆಗೆ ಒತ್ತಡದ ಸನ್ನಿವೇಶಗಳನ್ನು ಎದುರಿಸಬೇಕಾಗುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜನೆ ಮಾಡಲಿದ್ದೀರಿ. ಶುಭದಿನ 21. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

ಕಾನೂನು ವ್ಯಾಜ್ಯಗಳಲ್ಲಿ ಜಯ ಪಡೆಯುವ ಅವಕಾಶ ಇದೆ. ದೂರ ಪ್ರಯಾಣ ಮಾಡುವ ಯೋಗವಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಸಾಮಾಜಿಕವಾಗಿ ನಿಮ್ಮ ಶ್ರಮ ಹಾಗೂ ದುಡಿಮೆಗೆ ಮನ್ನಣೆ ದೊರೆಯಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ 22. ಕಾಲಭೈರವನ ಸೇವೆ ಮಾಡಿರಿ.







ಈ ವಾರ ಉಲ್ಲಸಿತವಾಗಿ ಸಮಯ ಕಳೆಯಲಿದ್ದೀರಿ. ರಾಜಕೀಯ ಕ್ಷೇತ್ರದಲ್ಲಿ ಇರುವವರ ಶ್ರಮಕ್ಕೆ ಮೆಚ್ಚುಗೆ ವ್ಯಕ್ತವಾಗಲಿದೆ. ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ವಿದೇಶ ಭೇಟಿಗೆ ಪ್ರಯತ್ನ ಮಾಡುತ್ತಿರುವವರಿಗೆ ವಿವಿಧ ಪ್ರಕ್ರಿಯೆಗಳು ಸರಾಗವಾಗಿ ಪೂರ್ಣಗೊಳ್ಳಲಿವೆ. ಶುಭದಿನ 23. ಈಶ್ವರನಿಗೆ ತಿಲಾರ್ಚನೆ ಮಾಡಿರಿ.

ದೊಡ್ಡ ಮಟ್ಟದ ಗೌರವ, ಸನ್ಮಾನ ಪಡೆಯುವ ಅವಕಾಶ ಇದೆ. ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಆಹಾರ, ನೀರು ಸೇವನೆಯ ಬಗ್ಗೆ ಎಚ್ಚರ ಇರಲಿ. ವಾರದ ಮಧ್ಯ ಭಾಗದಲ್ಲಿ ವೈಯಕ್ತಿಕ ಬದುಕಿಗೆ ಸಂಬಂಧಪಟ್ಟಂತೆ ಶುಭ ಸುದ್ದಿ ಕೇಳಲಿದ್ದೀರಿ. ಸಂಗಾತಿ ಜೊತೆಗಿನ ಭಿನ್ನಾಭಿಪ್ರಾಯಗಳನ್ನು ಬಗೆಹರಿಸಿಕೊಳ್ಳಲು ಸೂಕ್ತ ಸಮಯ ಇದು. ಶುಭದಿನ 22. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.







ಪ್ರಗತಿ ಪಡೆಯಲಿದ್ದೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಯಶಸ್ಸು ಪಡೆಯುವ ಯೋಗ ಇದೆ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ಯಾವುದೇ ವಿಚಾರದಲ್ಲಿ ವ್ಯವಹಾರ ಮಾಡುವಾಗ ಸೂಕ್ಷ್ಮವಾಗಿ ವರ್ತಿಸಿ. ಶುಭದಿನ 21. ಲಿಂಗಾಷ್ಟಕ ಓದಿರಿ.

ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಕಾಣುವ ಸಮಯ ಇದು. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮಕ್ಕಳು ಮಾಡುವ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸು ಹರಿವು ಹೆಚ್ಚಲಿದೆ. ವಾರದ ಮಧ್ಯ ಭಾಗದಲ್ಲಿ ಪ್ರೀತಿಪಾತ್ರರ ಜೊತೆಗೆ ಹೆಚ್ಚು ಸಮಯ ಕಳೆಯಲಿದ್ದೀರಿ. ಶುಭದಿನ 20. ಹನುಮಾನ್ ಚಾಲೀಸ್ ಓದಿರಿ.







ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಕೆಲ ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡುವುದರಿಂದ ಚಿಂತೆಗೆ ಕಾರಣವಾಗುತ್ತದೆ. ಹಣಕಾಸಿನ ಹರಿವು ಉತ್ತಮವಾಗಿರುತ್ತದೆ. ಹಳೆ ಸ್ನೇಹಿತರು ಶುಭ ಸುದ್ದಿ ನೀಡಲಿದ್ದಾರೆ. ಸ್ಪರ್ಧೆ, ಕ್ರೀಡಾ ಕ್ಷೇತ್ರದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಶುಭದಿನ 22. ನವದುರ್ಗಾ ಆರಾಧನೆ ಮಾಡಿರಿ.

ಆಸ್ತಿ ವ್ಯವಹಾರದಲ್ಲಿ ಲಾಭ ಗಳಿಸಲಿದ್ದೀರಿ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ರೀತಿಯಲ್ಲಿ ಅವಕಾಶಗಳು ನಿಮಗೆ ದೊರೆಯಲಿವೆ. ಅಧಿಕಾರದಲ್ಲಿ ಇರುವವರು ತಮ್ಮ ಕೆಲಸದ ಸಾಮರ್ಥ್ಯ ಮತ್ತು ಅನುಭವದ ಬಗ್ಗೆ ಮೆಚ್ಚುಗೆಯ ಮಾತುಗಳನ್ನು ಹೇಳಲಿದ್ದಾರೆ. ಶುಭದಿನ 23. ಚಂಡಿಪಾರಾಯಣ ಮಾಡಿರಿ.







ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಕೌಶಲ ಹೆಚ್ಚಿಸಿಕೊಳ್ಳಲು ಹಲವು ಬಗೆಯಲ್ಲಿ ಅವಕಾಶಗಳು ದೊರೆಯಲಿವೆ. ಪ್ರೀತಿಪಾತ್ರರ ಜೊತೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.

ಕಾನೂನು ವ್ಯಾಜ್ಯಗಳು ನಿಮ್ಮ ಪರವಾಗುವ ಸಾಧ್ಯತೆಗಳಿವೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ, ಬೆಂಬಲ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಶುಭದಿನ 24. ವಿಷ್ಣು ಸಹಸ್ರನಾಮ ಪಠಿಸಿರಿ.

